**<u>1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.</u>**

**ಸಿ ಸಿ ಸಂಃ 623/2023**

| | | |
|---|---|---|
| ಸಾಕ್ಷಿಯ ಹೆಸರುಃ | ಗಿರೀಶ | ಫ್ರಾಸಾಃಃ 5 |
| ತಂದೆಯ ಹೆಸರುಃ | ಚಂದ್ರೇಗೌಡ | ಚಾಸಾಃಃ 7 |
| ವಯಸ್ಸುಃ | 49 ವರ್ಷ | ಪ್ರಮಾಣೀಕರಿಸಿದ<br>ದಿಃ 27/01/2026 |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ಬೆಟ್ಟದಪುರ ಟೌನ್ ,<br>ಪಿರಿಯಾಪಟ್ಟಣ ತಾಲ್ಲೂಕು. | |

<u>**ಮುಖ್ಯ ವಿಚಾರಣೆಃ** ಮಾನ್ಯ **ಸಸಅ ರಿಂದಃ**</u>

ನನಗೆ ಆರೋಪಿತರು ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ಏನೂ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರು ಮಾಡಿಲ್ಲ ಮತ್ತು ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನಾನು ಯಾವುದೋ ಕೆಲಸದ ನಿಮಿತ್ತ ಪೊಲೀಸ್ ಠಾಣೆಗೆ ಹೋಗಿದ್ದಾಗ ಪೊಲೀಸರು ನನ್ನ ಸಹಿಯನ್ನು ಒಂದು ದಾಖಲೆಯ ಮೇಲೆ ಪಡೆದುಕೊಂಡಿರುತ್ತಾರೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಯು ಮಹಜರ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿಪಿ–4** ಎಂದು, ಸಾಕ್ಷಿಯ ಸಹಿಯನ್ನು **ನಿಪಿ–4(ಎ)** ಎಂದು ಗುರುತಿಸಲಾಯಿತು.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ. ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಸಸಅ ರವರಿಂದಃ</u>**

ಈಗ ನನಗೆ ಓದಿ ಹೇಳಿದಂತೆ "ದಿಃ 23.09.2023 ರಂದು ಪೋಲೀಸರು ಸ್ಥಳ ಕ್ಕೆ ಬಂದು ಚಾಸಾ-1 ಮತ್ತು 8 ರವರ ಸಮಕ್ಷಮ ನಿಪಿ-4 ರಂತೆ ಮಹಜರು ಕ್ರಮ ಜರುಗಿಸಿ ಒಂದು ದೊಣ್ಣೆ ಮತ್ತು ಕಲ್ಲನ್ನು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ. ಸದರಿ ಮಹಜರ್ ಗೆ ನಾನು ಸ್ಥಳದಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ</u>** ಇಲ್ಲ.

**ಮರು ವಿಚಾರಣೆಃ** ಇಲ್ಲ.

**<u>ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು</u>**
**<u>ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.</u>**

**1 ನೇ ಹೆಃಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.**
**ಪಿರಿಯಾಪಟ್ಟಣ.**